ಕರ್ನಾಟಕ ಸರ್ಕಾರ

# ರಾಷ್ಟ್ರೀಯ ಆರೋಗ್ಯ ಅಭಿಯಾನ

ಕರ್ನಾಟಕ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಬೆಂಗಳೂರು
ಆರೋಗ್ಯ ಸೌಧ, ಮಹಡಿ, ಮಾಗಡಿರಸ್ತೆ, ಬೆಂಗಳೂರು-560023

ಸಂಖ್ಯೆ:ಎನ್‌ಹೆಚ್‌ಎಂ/ಡಿಡಿ/ಐಎಂಎಂ/86/2020-21 ದಿನಾಂಕ: 20 05.2022

**ಇವರಿಗೆ,**

1. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
2. ಎಲ್ಲಾ ಜಿಲ್ಲಾ ಜಿಲ್ಲಾಧಿಕಾರಿಗಳು, ಜಿಲ್ಲಾಡಳಿತ ಕಛೇರಿ

**ಮಾನ್ಯರೆ,**

**ವಿಷಯ:** ವಿದೇಶಕ್ಕೆ ತೆರಳುವ ಫಲಾನುಭವಿಗಳ ಮುನ್ನೆಚ್ಚರಿಕೆ ಡೋಸ್ ಲಸಿಕಾಕರಣದ ಕುರಿತು.

**ಉಲ್ಲೇಖ:** ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯದ ಪತ್ರ ಸಂಖ್ಯೆ: D.O.No.T-22014/22/2021-Imm-Part(2) Dated: 13.05.2022

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯದ ಮಾರ್ಗಸೂಚಿಯಂತೆ ರಾಜ್ಯದಲ್ಲಿ ಮುನ್ನೆಚ್ಚರಿಕೆ ಡೋಸ್ ಲಸಿಕಾಕರಣವನ್ನು ಎರಡನೇ ಡೋಸ್ ಲಸಿಕೆ ಪಡೆದು 9 ತಿಂಗಳು ಅಥವಾ 39 ವಾರಗಳು ಪೂರೈಸಿದ ಫಲಾನುಭವಿಗಳಿಗೆ ನೀಡಲಾಗುತ್ತಿದೆ.

- ಪ್ರಸ್ತುತ ಕೋವಿನ್ ಪೋರ್ಟಲ್ ನಲ್ಲಿ ನಮೂದಿಸಿದಂತೆ ಎರಡನೇ ಡೋಸ್ ಲಸಿಕೆ ಪಡೆದು 9 ತಿಂಗಳು ಅಥವಾ 39 ವಾರಗಳು ಪೂರೈಸಿದ ಈ ಕೆಳಕಂಡ ಗುಂಪಿನವರು ಮುನ್ನೆಚ್ಚರಿಕೆ ಡೋಸ್ ಲಸಿಕೆ ಪಡೆಯಲು ಅರ್ಹರಿರುತ್ತಾರೆ.
  - ಆರೋಗ್ಯ ಕಾರ್ಯಕರ್ತರು
  - ಮುಂಚೂಣಿ ಕಾರ್ಯಕರ್ತರು
  - 60 ವರ್ಷ ಮೇಲ್ಪಟ್ಟವರು ಯಾವುದೇ ಸರ್ಕಾರಿ ಅಥವಾ ಖಾಸಗಿ ಕೋವಿಡ್-19 ಲಸಿಕಾ ಕೇಂದ್ರಗಳಲ್ಲಿ ಪಡೆಯಬಹುದು.
  - 18 ರಿಂದ 59 ವರ್ಷದವರು ಖಾಸಗಿ ಲಸಿಕಾ ಕೇಂದ್ರಗಳಲ್ಲಿ ನಿಗದಿಪಡಿಸಿದ ಮೊತ್ತವನ್ನು ಪಾವತಿಸಿ ಲಸಿಕೆ ಪಡೆಯಬಹುದು.
  - ಮುನ್ನೆಚ್ಚರಿಕೆ ಡೋಸ್ ಲಸಿಕೆಯು ಏಕರೂಪವಾಗಿರುತ್ತದೆ ಅಂದರೆ ಫಲಾನುಭವಿಯು ಯಾವ ಮಾದರಿಯ ಲಸಿಕೆಯನ್ನು (ಕೋವಿಶೀಲ್ಡ್ / ಕೋವ್ಯಾಕ್ಸಿನ್ ಲಸಿಕೆ) 1ನೇ ಮತ್ತು 2ನೇ ಡೋಸ್ ಆಗಿ ಪಡೆದಿರುತ್ತಾರೋ ಅದೇ ಮಾದರಿಯ ಲಸಿಕೆಯನ್ನು ಮುನ್ನೆಚ್ಚರಿಕೆ ಡೋಸ್ ಆಗಿ ಪಡೆಯುತ್ತಾರೆ.

ಮುಂದುವರೆದು, ವಿವಿಧ ಕಾರಣಗಳಿಗಾಗಿ ವಿದೇಶಕ್ಕೆ ತೆರಳುವ ಫಲಾನುಭವಿಗಳಿಂದ ಅವಧಿಗಿಂತ ಮೊದಲು ಮುನ್ನೆಚ್ಚರಿಕಾ ಡೋಸ್ ಲಸಿಕೆ ಪಡೆಯಲು ಕೋರಿಕೆ ಬಂದಿರುವ ಹಿನ್ನೆಲೆಯಲ್ಲಿ ತಾಂತ್ರಿಕ ಸಲಹೆಗಾರರ ಶಿಫಾರಸ್ಸಿನಂತೆ ಸಮರ್ಥ ಪ್ರಾಧಿಕಾರವು (Competent Authority) ಸದರಿಯವರ ಮುನ್ನೆಚ್ಚರಿಕೆ ಲಸಿಕೆ ಡೋಸ್ ಅನ್ನು ಎರಡನೇ ಡೋಸ್ ಪಡೆದ ನಂತರ ಕನಿಷ್ಠ 90 ದಿನಗಳು (minimum 90 days between 2nd dose and precaution dose) ಪೂರೈಸಿರುವುದನ್ನು ಖಾತರಿಪಡಿಸಿಕೊಂಡು ನೀಡಲು ಅನುಮೋದಿಸಿದೆ ಹಾಗೂ ಈ ಕುರಿತು ಕೋವಿನ್ ಪೋರ್ಟಲ್‌ನಲ್ಲಿ ಅಗತ್ಯ ಅವಕಾಶವನ್ನು ಕಲ್ಪಿಸಲಾಗಿದೆ.

- **ವಿದೇಶಕ್ಕೆ ತೆರಳುವ ಫಲಾನುಭವಿಗಳ ಅವಧಿ ಪೂರ್ವ ಮುನ್ನೆಚ್ಚರಿಕೆ ಲಸಿಕೆ ಡೋಸ್**

ವಿದೇಶಕ್ಕೆ ತೆರಳುವ ಫಲಾನುಭವಿಗಳಿಗೆ ಅವರು ತಲುಪುವ ದೇಶದ ಮುನ್ನೆಚ್ಚರಿಕೆ ಡೋಸ್ ಲಸಿಕೆ ಅಗತ್ಯತೆಗನುಗುಣವಾಗಿ / ವಿದ್ಯಾಭ್ಯಾಸಕ್ಕೆ / ನೌಕರಿಗಾಗಿ / ವಿದೇಶಗಳಲ್ಲಿ ಕ್ರೀಡೆಗಳಲ್ಲಿ ಭಾಗವಹಿಸಲು / ಭಾರತದ ಅಧಿಕೃತ ಪ್ರತಿನಿಧಿಯಾಗಿ ವಿದೇಶಗಳಲ್ಲಿ ಸಭೆಗಳಲ್ಲಿ ಭಾಗವಹಿಸಲು / ವ್ಯಾಪಾರಕ್ಕೆ ಸಂಬಂಧಿಸಿದಂತೆ ವಿದೇಶಕ್ಕೆ ತೆರಳುವವರಿಗೆ ಅವಧಿಗೆ ಮುನ್ನ ಮುನ್ನೆಚ್ಚರಿಕೆ ಲಸಿಕೆ ಡೋಸ್ ಪಡೆಯಲು ಈ ಕೆಳಕಂಡಂತೆ ಅವಕಾಶ ಕಲ್ಪಿಸಲಾಗಿದೆ.

- ಕೋವಿನ್ ಪೋರ್ಟಲ್ ನಲ್ಲಿ ನಮೂದಿಸಿದಂತೆ ಎರಡನೇ ಡೋಸ್ ಕೋವಿಡ್-19 ಲಸಿಕೆ ಪಡೆದು ಕನಿಷ್ಠ 3 ತಿಂಗಳು ಪೂರೈಸಿದ್ದರೆ (ಈ ಹಿಂದೆ ನಿಗಧಿಪಡಿಸಿದ 9 ತಿಂಗಳ) ಅವಧಿ ಪೂರ್ವ ಮುನ್ನೆಚ್ಚರಿಕೆ ಲಸಿಕೆ ಡೋಸ್ ಪಡೆಯಬಹುದಾಗಿರುತ್ತದೆ.

ಅರುಂಧತಿ

- ಮುನ್ನೆಚ್ಚರಿಕೆ ಡೋಸ್ ಲಸಿಕಾಕರಣವನ್ನು ನಡೆಸುತ್ತಿರುವ ಎಲ್ಲಾ ಕೋವಿಡ್-19 ಲಸಿಕಾ ಕೇಂದ್ರಗಳು ಅವಧಿಗಿಂತ ಮೊದಲು (ಅಂದರೆ 2ನೇ ಡೋಸ್ ಲಸಿಕೆ ಪಡೆದ 3 ತಿಂಗಳಿಂದ ರಿಂದ 9 ತಿಂಗಳೊಳಗೆ) ಮುನ್ನೆಚ್ಚರಿಕೆ ಡೋಸ್ ಲಸಿಕಾಕರಣವನ್ನು ನಡೆಸಬಹುದು.
- ಈ ಸೌಲಭ್ಯವನ್ನು ಪಡೆದುಕೊಳ್ಳಲು VISA, ಪ್ರಯಾಣ ಸಂಬಂಧಿತ ದಾಖಲೆಗಳು, ಇತ್ಯಾದಿ ದಾಖಲೆಗಳನ್ನು ಕೋವಿನ್ ಪೋರ್ಟಲ್ ನಲ್ಲಿ ಅಪ್‌ಲೋಡ್ ಮಾಡುವ ಅವಶ್ಯಕತೆ ಇರುವುದಿಲ್ಲ.
- ಈ ರೀತಿಯಾಗಿ ನೀಡಲಾದ ಮುನ್ನೆಚ್ಚರಿಕೆ ಲಸಿಕೆ ಡೋಸ್ ಅನ್ನು ಕೋವಿನ್ ಪೋರ್ಟಲ್ ನಲ್ಲಿ ಅಪಲೋಡ್ ಮಾಡಲು ಅಗತ್ಯ ಸೌಲಭ್ಯ ಕಲ್ಪಿಸಲಾಗಿದೆ.
- ಎಲ್ಲಾ ಹಂತದ ಕೋವಿಡ್-19 ಲಸಿಕಾಕರಣದ ಮಾರ್ಗಸೂಚಿಯನ್ವಯ ಪಾಲಿಸುವುದು.

ಸದರಿ ಅಂಶಗಳನ್ನೊಳಗೊಂಡ ಮಾಹಿತಿಯನ್ನು ಎಲ್ಲಾ ಸರ್ಕಾರಿ ಮತ್ತು ಖಾಸಗಿ ಕೋವಿಡ್-19 ಲಸಿಕಾ ಕೇಂದ್ರಗಳಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಈ ಮೂಲಕ ಕೋರಲಾಗಿದೆ.

ಅರುಂಧತಿ

**ಅಭಿಯಾನ ನಿರ್ದೇಶಕರು**
**ರಾಷ್ಟ್ರೀಯ ಆರೋಗ್ಯ ಅಭಿಯಾನ**

**ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ**

1. ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು.
2. ಮುಖ್ಯ ಆರೋಗ್ಯಾಧಿಕಾರಿಗಳು (ಸಾರ್ವಜನಿಕ ಆರೋಗ್ಯ) ಬಿಬಿಎಂಪಿ.
3. ಎಲ್ಲಾ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿಗಳು.
4. ಲಸಿಕಾಧಿಕಾರಿಗಳು, ಬಿಬಿಎಂಪಿ

**ಪ್ರತಿಯನ್ನು ಮಾಹಿತಿಗಾಗಿ,**

1. ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ.
2. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ.
3. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
4. ವಿಶೇಷ ಆಯುಕ್ತರು (ಆರೋಗ್ಯ), ಬಿಬಿಎಂಪಿ.
5. ಎಲ್ಲಾ ಜಿಲ್ಲಾ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಜಿಲ್ಲಾ ಪಂಚಾಯತ್ ಕಛೇರಿ.
6. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
7. ಯೋಜನಾ ನಿರ್ದೇಶಕರು(ಆರ್‌ಸಿಹೆಚ್) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
8. ಉಪ ನಿರ್ದೇಶಕರು (ಲಸಿಕೆ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
9. ಉಪ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
10. ಕಛೇರಿ ಪ್ರತಿ.